**ಕರ್ನಾಟಕ ಸರ್ಕಾರ**

ಸಂ.ಗ್ರಾಅಪ:40:ಸುಗ್ರಾಯೋ:2009

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:27.04.2012.

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ

ಗೆ:
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್

ಮಾನ್ಯರೇ,

ವಿಷಯ: ಸುವರ್ಣ ಗ್ರಾಮೋದಯ ಯೋಜನೆಯ ಅನುಷ್ಠಾನದ ಬಗ್ಗೆ.

ಸುವರ್ಣ ಗ್ರಾಮೋದಯ ಯೋಜನೆಯ 1ನೇ ಮತ್ತು 3ನೇಯ ಹಂತ ರಾಜ್ಯದ ಎಲ್ಲಾ ಜಿಲ್ಲೆಗಳ 2778 ಗ್ರಾಮಗಳಲ್ಲಿ ಜಾರಿಯಲ್ಲಿರುತ್ತದೆ. 2ನೇ ಮತ್ತು 4ನೇ ಹಂತ ಗುಲ್ಬರ್ಗಾ ಕಂದಾಯ ವಿಭಾಗದ 6 ಜಿಲ್ಲೆಗಳ 603 ಗ್ರಾಮಗಳಲ್ಲಿ ಜಾರಿಯಲ್ಲಿರುತ್ತದೆ. 1ನೇ ಹಂತದ ಕಾರ್ಯಕ್ರಮವನ್ನು 30 ಜೂನ್ 2010ರಂದು ಮುಕ್ತಾಯಗೊಳಿಸಲಾಗಿದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಯೋಜನೆಯ ಸಮನ್ವಯ ಅಧಿಕಾರಿಯಾಗಿದ್ದು, ಆಯ್ಕೆಯಾದ ಗ್ರಾಮಗಳ ಗ್ರಾಮಾಭಿವೃದ್ಧಿ ಯೋಜನೆಗಳನ್ನು ಸಿದ್ಧಪಡಿಸಿಕೊಂಡು ಕಾರ್ಯಾಚರಣೆ ಕೈಪಿಡಿಯನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ಮೂಲಭೂತ ಸೌಲಭ್ಯ ಮತ್ತು ಮೂಲಭೂತ ಸೇವೆಗಳನ್ನು ಅಭಿವೃದ್ಧಿಪಡಿಸಲು ಆದ್ಯತೆ ನೀಡುವ ಅವಶ್ಯಕತೆಯಿದೆ. ಸುವರ್ಣ ಗ್ರಾಮೋದಯ ಯೋಜನೆಯಡಿ ಒದಗಿಸಿರುವ ಅನುದಾನದೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅನುಷ್ಠಾನಗೊಳಿಸುವ ರಾಜ್ಯ ಮತ್ತು ಜಿಲ್ಲಾ ವಲಯ ಕಾರ್ಯಕ್ರಮಗಳಡಿ ನಿಗದಿಪಡಿಸುವ ಅನುದಾನದಲ್ಲಿ ಸಂಬಂಧಪಟ್ಟ ಚಟುವಟಿಕೆಗಳಿಗೆ ಅವಶ್ಯಕ ಅನುದಾನವನ್ನು ಒದಗಿಸಿಕೊಂಡು, ಸುವರ್ಣ ಗ್ರಾಮೋದಯ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವುದು. ವಿಶೇಷವಾಗಿ

- TSC ಕಾರ್ಯಕ್ರಮಗಳಡಿ ಗ್ರಾಮದ ಸ್ವಚ್ಛತೆ ಹಾಗೂ ನೈರ್ಮಲ್ಯದ ಬಗ್ಗೆ ಆಗುವ ದುಷ್ಪರಿಣಾಮದ ಅರಿವು ಮೂಡಿಸಿ ತಿಪ್ಪೆಗುಂಡಿ ಸ್ಥಳಾಂತರಿಸಲು ಮತ್ತು ಶೌಚಾಲಯಗಳನ್ನು ನಿರ್ಮಿಸಲು ಕ್ರಮ ವಹಿಸುವುದು.

P.T.O

- ನಿರುದ್ಯೋಗಿ ಯುವಕ/ಯುವತಿಯರನ್ನು ಸ್ವಸಹಾಯ ಸಂಘಗಳಲ್ಲಿ ತೊಡಗಿಸಿ SGSY ಯೋಜನೆಯಡಿ ಸ್ಥಳೀಯವಾಗಿ ಬೇಡಿಕೆ ಇರುವ ತರಬೇತಿ ನೀಡಿ ಉದ್ಯೋಗವನ್ನು ಒದಗಿಸಿಕೊಡುವುದು.
- MGNREGA ಯೋಜನೆಯಡಿ ಕೂಲಿಯಾಧಾರಿತ ಉದ್ಯೋಗ ಸೃಜಿಸಿ ಗ್ರಾಮೀಣ ಜನರ ಜೀವನಕ್ಕೆ ಭದ್ರತೆ ಒದಗಿಸಿ, ಜಲಸಂರಕ್ಷಣೆ ಮತ್ತು ಅರಣ್ಯೀಕರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು.

ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ಗ್ರಾಮಾಭಿವೃದ್ಧಿ ಯೋಜನೆಗಳನ್ನು ಪೂರ್ವಭಾವಿ ಸಮೀಕ್ಷೆಯೊಂದಿಗೆ ಗ್ರಾಮಗಳಿಗೆ ಅವಶ್ಯಕತೆಯಿರುವ ಸೌಲಭ್ಯಗಳನ್ನು ಜನಸಮುದಾಯದ ಆಶೋತ್ತರದಂತೆ ಮತ್ತು ಸ್ಥಳೀಯ ಚುನಾಯಿತ ವಿಧಾನಸಭಾ ಸದಸ್ಯರುಗಳ ಸಮಾಲೋಚನೆಯೊಂದಿಗೆ NGOಗಳ ಮುಖಾಂತರ ತಯಾರಿಸಿ, ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಸುವರ್ಣ ಗ್ರಾಮೋದಯ ಯೋಜನೆಯಡಿ ಒದಗಿಸಿರುವ ಅನುದಾನದೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅನುಷ್ಠಾನಗೊಳಿಸುವ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿಗಳ ಕಾರ್ಯಕ್ರಮಗಳಡಿ ನಿಗದಿಪಡಿಸುವ ಅನುದಾನದಲ್ಲಿ ಸಂಬಂಧಪಟ್ಟ ಚಟುವಟಿಕೆಗಳಿಗೆ ಅವಶ್ಯಕ ಅನುದಾನವನ್ನು ಒದಗಿಸಿಕೊಂಡು, NGOಗಳು ತಯಾರಿಸಿರುವ ಗ್ರಾಮಾಭಿವೃದ್ಧಿ ಯೋಜನೆಯನ್ನು ಸಂಪೂರ್ಣವಾಗಿ ಅಳವಡಿಸಿಕೊಂಡು ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವುದು.

ಆಯ್ಕೆಯಾದ ಗ್ರಾಮಗಳಲ್ಲಿ ತೆಗೆದುಕೊಂಡ ಕಾಮಗಾರಿ ವಿವರವನ್ನು ಪ್ರದರ್ಶನ ಫಲಕದ ಮೇಲೆ ಪ್ರದರ್ಶಿಸಿ, ಅಧಿಕಾರಿಗಳು ಗ್ರಾಮದ ಜನಸಮುದಾಯ ಮತ್ತು ಸ್ಥಳೀಯ ಚುನಾಯಿತ ವಿಧಾನಸಭಾ ಸದಸ್ಯರುಗಳೊಂದಿಗೆ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಶ್ರಮಿಸಬೇಕು. ಕಾಮಗಾರಿಗಳ ಗುಣಮಟ್ಟದ ಬಗ್ಗೆ ತೀವ್ರ ನಿಗಾ ಇಟ್ಟು, ನ್ಯೂನತೆಗಳಿದ್ದಲ್ಲಿ ಸರಿಪಡಿಸುವ ಕ್ರಮ ಕೈಗೊಳ್ಳಬೇಕು. ಉದ್ದೇಶಿತ ಫಲಿತಾಂಶಗಳು ಹಾಗೂ ಫಲಶೃತಿಗಳ ಸಾಧನೆ ಕೈಗೊಳ್ಳಬೇಕು.

ಸುವರ್ಣ ಗ್ರಾಮೋದಯ ಯೋಜನೆಯ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು, ಕಾರ್ಯಕ್ರಮದ ಕಾರ್ಯಾಚರಣೆ ಕೈಪಿಡಿಯನ್ವಯ ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾಗದ ಇನ್ನುಳಿದ ಗ್ರಾಮಗಳನ್ನು ಸುವರ್ಣ ಗ್ರಾಮಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸುವುದು.

ನಿಮ್ಮ ವಿಶ್ವಾಸಿ,

27/4/12

(ಡಾ: ಅಮಿತಾ ಪ್ರಸಾದ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ